# ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ - 563 103.

ಸಂಖ್ಯೆ: ಬೆಂ.ಉ.ವಿ.ವಿ/ಪ್ರಾ, ರ್‍ಯಾಗಿಂಗ್/990/ 2019-20 ದಿನಾಂಕ: 05.12.2019

## ಸುತ್ತೋಲೆ

ವಿಷಯ: ಕಾಲೇಜುಗಳ ವಿದ್ಯಾರ್ಥಿಗಳಲ್ಲಿ ರ್‍ಯಾಗಿಂಗ್ ಪಿಡುಗು ತಡೆಗಟ್ಟುವಲ್ಲಿ ಮುಂಜಾಗ್ರತಾ ಕ್ರಮ ಕೈಗೊಳ್ಳುವ ಬಗ್ಗೆ.

* * *

ಸದರಿ ವಿಷಯಕ್ಕೆ ಸಂಬಂಧಿಸಿದಂತೆ ತಿಳಿಸುವುದೇನೆಂದರೆ, ಕಾಲೇಜು ಮತ್ತು ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳಲ್ಲಿ ಆತ್ಮಸ್ಥೈರ್ಯ, ನಾಯಕತ್ವ ಗುಣ, ಸಾಮರಸ್ಯ ಹಾಗೂ ಕ್ಯಾಂಪಸ್‌ನಲ್ಲಿ ಉತ್ತಮ ವಿದ್ಯಾರ್ಥಿ ಸ್ನೇಹಿ ವಾತಾವರಣವಿರಬೇಕು ಎನ್ನುವ ಉದ್ದೇಶದಿಂದ ಯಾವ ಕಾರಣಕ್ಕೂ ವಿದ್ಯಾರ್ಥಿಗಳಲ್ಲಿ ರ್‍ಯಾಗಿಂಗ್ ನಡೆಯದಂತೆ ಸೂಕ್ತ ಕ್ರಮಕೈಗೊಳ್ಳುವಲ್ಲಿ ಯುಜಿಸಿ , ಎಐಸಿಟಿಇ ಮತ್ತು ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆ, ಭಾರತ ಸರ್ಕಾರ ಇವರು ಈಗಾಗಲೇ ಹಲವಾರು ರೀತಿ ಮಾರ್ಗದರ್ಶನ ಮತ್ತು ನಿರ್ದೇಶನವನ್ನು ನೀಡಿರುತ್ತದೆ. ಜೊತೆಗೆ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಇವರೂ ಸಹ ಸದರಿ ವಿಷಯದ ಬಗ್ಗೆ ಹಲವಾರು ಮಾರ್ಗಸೂಚಿಗಳನ್ನು ಪಾಲಿಸುವಂತೆ ನಿರ್ದೇಶಿಸಿರುತ್ತಾರೆ.

ಆದಾಗ್ಯೂ ಕೆಲವು ಕಾಲೇಜುಗಳಲ್ಲಿ ರ್‍ಯಾಗಿಂಗ್‌ನಂತಹ ಸಣ್ಣ ಘಟನೆಗಳು ನಡೆದಿರುವ ಬಗ್ಗೆ ಮಾದ್ಯಮಗಳಲ್ಲಿ ವರದಿಯಾಗುತ್ತಿರುವುದು ತುಂಬ ಶೋಚನೀಯ. ಸರ್ಕಾರ ಮತ್ತು ವಿಶ್ವವಿದ್ಯಾಲಯವು ಇಂತಹ ಘಟನೆಗಳು ನಡೆಯುವ ಕಾಲೇಜುಗಳನ್ನು ತುಂಬಾ ಗಂಬೀರವಾಗಿ ಪರಿಗಣಿಸುತ್ತದೆ. ಈ ಹಿನ್ನಲೆಯಲ್ಲಿ ಎಲ್ಲಾ ಕಾಲೇಜು ಪ್ರಾಂಶುಪಾಲರು ತಮ್ಮ ಕಾಲೇಜಿನಲ್ಲಿ ರ್‍ಯಾಗಿಂಗ್‌ಗೆ ಸಂಬಂಧಿಸಿದ ಮಾರ್ಗದರ್ಶನಗಳನ್ನು ವ್ಯವಸ್ಥಿತವಾಗಿ ಅಳವಡಿಸುವುದು ಮತ್ತು ವಿದ್ಯಾರ್ಥಿಗಳು ಇಂತಹ ಘಟನೆಗಳಲ್ಲಿ ಭಾಗಿಯಾಗದ/ ಘಟಿಸದ ಹಾಗೆ ಸೂಕ್ತ ತಿಳುವಳಿಕೆ ನೀಡುವುದು ತಮ್ಮ ಜವಾಬ್ದಾರಿ ಮತ್ತು ಕರ್ತವ್ಯವಾಗಿರುತ್ತದೆ.

ಆದ್ದರಿಂದ ಯಾವ ಕಾರಣಕ್ಕೂ ಇಂತಹ ಘಟನೆಗಳು ನಡೆಯದಂತೆ ಪ್ರಾಂಶುಪಾಲರು ಸೂಕ್ತ ಕ್ರಮಕೈಗೊಳ್ಳುವುದು.

ಕುಲಪತಿಗಳು

ಕುಲಪತಿಗಳ ಕಾರ್ಯಾಲಯ
ಬೆಂಗಳೂರು ಉತ್ತರ ವಿಶ್ವವಿದ್ಯಾಲಯ
ಟಮಕಾ, ಕೋಲಾರ - ಕರ್ನಾಟಕ - 563 103.

ಗೆ,

ಎಲ್ಲಾ ಪ್ರಾಂಶುಪಾಲರುಗಳು
ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ವ್ಯಾಪ್ತಿಯ ಸಂಯೋಜಿತ ಕಾಲೇಜುಗಳು

ಪ್ರತಿಗಳು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-563 103.
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಅಂಬೇಡ್ಕರ್ ಬೀದಿ, ಬೆಂಗಳೂರು-560 001.
3. ಉಪಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-563 103.
4. ಕುಲಸಚಿವರು/ ಕುಲಸಚಿವರು(ಮೌ)/ ವಿತ್ತಾಧಿಕಾರಿಗಳು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ-563 103.
5. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಮಂಗಸಂದ್ರ, ಕೋಲಾರ.
6. ಪ್ರಾಂಶುಪಾಲರು, ವಿಶ್ವವಿದ್ಯಾಲಯ ಶಿಕ್ಷಣ ಕಾಲೇಜು, ಚಿಕ್ಕಬಳ್ಳಾಪುರ.
7. ಕಚೇರಿ ಪ್ರತಿ.

Scanned by CamScanner